# <u>ಮಂಗಳೂರು ವಿಶ್ವವಿದ್ಯಾನಿಲಯ</u>

42**ನೇ ವಾರ್ಷಿಕ ಘಟಿಕೋತ್ಸವದ ಪೂರ್ವಭಾವಿಯಾಗಿ** ದಿನಾಂಕ 14.06.2024 ರಂದು ಪೂರ್ವಾಹ್ನ ಗಂಟೆ 10.00ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟ್ ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2024ನೇ ಸಾಲಿನ **ತೃತೀಯ** ವಿಶೇಷ ಸಭೆಯ ನಡವಳಿಗಳು.

**ಉಪಸ್ಥಿತರು:**

| **ಕ್ರ.ಸಂ.** | **ಹೆಸರು** | | |
|---|---|---|---|
| 1. | ಪ್ರೊ. ಪಿ.ಎಲ್. ಧರ್ಮ<br>ಕುಲಪತಿಗಳು | ಅಧ್ಯಕ್ಷರು | |
| 2. | ಡಾ. ರಾಮೇಗೌಡ ಎಂ.,<br>ಜಂಟಿ ನಿರ್ದೇಶಕರು<br>(ಕಾಲೇಜು ಶಿಕ್ಷಣ ಆಯುಕ್ತರ ಪರವಾಗಿ) | ಸದಸ್ಯರು | |
| 3. | ಪ್ರೊ. ಎಂ. ಜಯಶಂಕರ್<br>ಡೀನರು, ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯ | ಸದಸ್ಯರು | |
| 4. | ಡಾ. ಎಸ್. ಬಿ. ಎಂ. ಪ್ರಸನ್ನ | ಸದಸ್ಯರು | ಆನ್ ಲೈನ್ ಮೂಲಕ |
| 5. | ಡಾ. ಕೆ. ಸಿ. ಮಹದೇಶ | ಸದಸ್ಯರು | |
| 6. | ಡಾ. ಶಂಕರಮೂರ್ತಿ ಹೆಚ್.ಕೆ. | ಸದಸ್ಯರು | |
| 7. | ಡಾ. ವರದರಾಜ ಸಿ.ಎಚ್ | ಸದಸ್ಯರು | |
| 8. | ಫಾದರ್ ಮೈಕಲ್ ಸಂತುಮಯೋರ್ | ಸದಸ್ಯರು | |
| 9. | ಡಾ. ಜೋಶ್ನ ರಾವ್. ಕೆ | ಸದಸ್ಯರು | |
| 10. | ಶ್ರೀ ಸುರೇಶ್ ಕುಮಾರ್ ಬಿ. ನಾವೂರು | ಸದಸ್ಯರು | |
| 11. | ಶ್ರೀ ಸಿ.ಎ. ನಿತಿನ್ ಜೆ. ಶೆಟ್ಟಿ, . | ಸದಸ್ಯರು | |
| 12. | ಶ್ರೀಮತಿ ಜೂಡಿತ್ ಮೆಂಡೋನ್ಸ್ | ಸದಸ್ಯರು | |
| 13. | ಶ್ರೀ ರಘುರಾಜ್ | ಸದಸ್ಯರು | |
| 14. | ಶ್ರೀ ಅಚ್ಯುತ ಗಟ್ಟಿ | ಸದಸ್ಯರು | |
| 15. | ಶ್ರೀ ಮೊಹಮ್ಮದ್ ಸವಾದ್ | ಸದಸ್ಯರು | |
| 16. | ಡಾ. ದೇವೇಂದ್ರಪ್ಪ. ಹೆಚ್,<br>ಕುಲಸಚಿವರು (ಪರೀಕ್ಷಾಂಗ) | ಸದಸ್ಯರು | |

| | | |
|---|---|---|
| 17. | ಪ್ರೊ. ವೈ. ಸಂಗಪ್ಪ<br>ಹಣಕಾಸು ಅಧಿಕಾರಿ (ಪ್ರಭಾರ) | ವಿಶೇಷ<br>ಆಹ್ವಾನಿತರು |
| 18. | ಶ್ರೀ ಕೆ. ರಾಜು ಮೊಗವೀರ, ಕೆ.ಎ.ಎಸ್.<br>ಕುಲಸಚಿವರು (ಆಡಳಿತ) | ಸದಸ್ಯ<br>ಕಾರ್ಯದರ್ಶಿ |

**ಅನುಪಸ್ಥಿತರು:**

| | | |
|---|---|---|
| 1. | ತಾಂತ್ರಿಕ ಶಿಕ್ಷಣ ನಿರ್ದೇಶಕರು | ಸದಸ್ಯರು |
| 2. | ಡಾ. ಸಂದೇಶ್ ಕೆ. ಎಸ್<br>ಕುಲಸಚಿವರು, ಕೆ.ವಿ.ಜಿ.ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆ ಸುಳ್ಯ<br>(ವೈದ್ಯಕೀಯ ಶಿಕ್ಷಣ ನಿರ್ದೇಶಕರು ಇವರ ಪರವಾಗಿ) | ಸದಸ್ಯರು |
| 3. | ಡಾ. ಸಿಪ್ರಿಯನ್ ಮೊಂತೆರೊ<br>ಪ್ರಾಂಶುಪಾಲರು ಹಾಗೂ ಸಹ ನಿರ್ದೇಶಕರು, ಶಿಕ್ಷಕ ಶಿಕ್ಷಣ ಮಹಾವಿದ್ಯಾಲಯ<br>(ಸಾರ್ವಜನಿಕ ಶಿಕ್ಷಣ ಆಯುಕ್ತರ ಪರವಾಗಿ) | ಸದಸ್ಯರು |
| 4. | ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ | ಸದಸ್ಯರು |

## ಪ್ರಾರಂಭಿಕ

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಯವರನ್ನು ಹಾಗೂ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಸಭೆಗೆ ಸ್ವಾಗತಿಸಿದರು.

- **ಸ್ವಾಗತ:**

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 28(1)(ಎಫ್)ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟಿಗೆ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತೆ ಹಾಗೂ ಸರದಿಯ ಮೇರೆಗೆ ಸದಸ್ಯರಾಗಿ ನಾಮನಿರ್ದೇಶನ ಗೊಂಡಿರುವ ಡಾ. ಶಂಕರಮೂರ್ತಿ ಎಚ್.ಕೆ, ಪ್ರಾಂಶುಪಾಲರು, ಆಳ್ವಾಸ್ ಕಾಲೇಜ್ ಆಫ್ ಎಜ್ಯುಕೇಶನ್, ಮೂಡಬಿದ್ರಿ ಇವರನ್ನು ಮಾನ್ಯ ಕುಲಪತಿಗಳು ಸಿಂಡಿಕೇಟ್ ಸಭೆಗೆ ಸ್ವಾಗತಿಸಿದರು.

➢ **ಕೃತಜ್ಞತೆ:**

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ದ ಪ್ರಕರಣ 28(1)(ಎಫ್) ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟಿಗೆ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳ ಜೇಷ್ಠತೆ ಹಾಗೂ ಸರದಿಯ ನೆಲೆಯಲ್ಲಿ ಸದಸ್ಯರಾಗಿ ಮಾನ್ಯ ಕುಲಪತಿಗಳಿಂದ ನಾಮನಿರ್ದೇಶನಗೊಂಡಿದ್ದ ಶ್ರೀ ಕೃಷ್ಣಪ್ರಸಾದ್ ಕೆ. ಎನ್, ಪ್ರಾಂಶುಪಾಲರು, ಶ್ರೀರಾಮ ಪ್ರಥಮ ದರ್ಜೆ ಕಾಲೇಜು, ಕಲ್ಲಡ್ಕ ಇವರ ಸದಸ್ಯತ್ವ ಅವಧಿಯು ದಿನಾಂಕ 07.06.2024 ರಂದು ಕೊನೆಗೊಂಡಿರುವುದರಿಂದ ಸದರಿಯವರನ್ನು ಸಿಂಡಿಕೇಟು ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

ಇವರು ತಮ್ಮ ಸಿಂಡಿಕೇಟು ಸದಸ್ಯತ್ವದ ಅವಧಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಮತ್ತು ಸಹಕಾರಗಳನ್ನು ನೀಡಿರುವುದಕ್ಕಾಗಿ ಇವರಿಗೆ ಸಿಂಡಿಕೇಟ್ ಹಾಗೂ ಮಂಗಳೂರು ವಿಶ್ವವಿದ್ಯಾನಿಲಯದ ಪರವಾಗಿ ಕೃತಜ್ಞತಾಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಾಯಿತು.

➢ **ಪ್ರಾಸ್ತಾವಿಕ**

**ಮಾನ್ಯ ಕುಲಪತಿಗಳು ಮಾತನಾಡುತ್ತಾ ಈ ಕೆಳಗಿನ ವಿಷಯಗಳನ್ನು ಸಭೆಗೆ ತಿಳಿಸಿದರು.**

ಮಂಗಳೂರು ವಿಶ್ವವಿದ್ಯಾನಿಲಯದ 42ನೇ ವಾರ್ಷಿಕ ಘಟಿಕೋತ್ಸವ ಸಮಾರಂಭವನ್ನು ದಿನಾಂಕ 15.06.2024ರಂದು ವಿಶ್ವವಿದ್ಯಾನಿಲಯದ ಮಂಗಳ ಸಭಾಂಗಣದಲ್ಲಿ ಹಮ್ಮಿಕೊಂಡಿರುವ ವಿಷಯವನ್ನು ಸಭೆಗೆ ತಿಳಿಸುತ್ತಾ, ಗೌರವಾನ್ವಿತ ರಾಜ್ಯಪಾಲರು ಹಾಗೂ ವಿಶ್ವವಿದ್ಯಾನಿಲಯದ ಕುಲಾಧಿಪತಿಗಳಾಗಿರುವ ಶ್ರೀ ಥಾವರ್ ಚಂದ್ ಗೆಹ್ಲೋಟ್, ಇವರು ಸಮಾರಂಭದ ಅಧ್ಯಕ್ಷತೆ ವಹಿಸಲಿರುವ ವಿಷಯವನ್ನು ಸಭೆಗೆ ತಿಳಿಸಿದರು. ಮಾನ್ಯ ಉನ್ನತ ಶಿಕ್ಷಣ ಸಚಿವರು ಹಾಗೂ ವಿಶ್ವವಿದ್ಯಾನಿಲಯದ ಸಹ ಕುಲಾಧಿಪತಿಗಳಾದ ಡಾ. ಎಂ.ಸಿ. ಸುಧಾಕರ್ ಹಾಗೂ ಮುಖ್ಯ ಅತಿಥಿಗಳಾಗಿ ಪ್ರೊ, ಸಚಿನ್ ಚತುರ್ವೇದಿ, ಮಹಾ ನಿರ್ದೇಶಕರು, ಅಭಿವೃದ್ಧಿಶೀಲ ರಾಷ್ಟ್ರಗಳ ಸಂಶೋಧನೆ ಮತ್ತು ಮಾಹಿತಿ ವ್ಯವಸ್ಥೆ, ನವದೆಹಲಿ ಇವರು ಘಟಿಕೋತ್ಸವ ಭಾಷಣ ಮಾಡಲಿರುವ ವಿಚಾರವನ್ನು ಹಾಗೂ ಘಟಕೋತ್ಸವ ಸಂಬಂಧದ ತಯಾರಿಗಳನ್ನು ಸಭೆಗೆ ತಿಳಿಸುತ್ತಾ, ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಘಟಿಕೋತ್ಸವ ಸಮಾರಂಭಕ್ಕೆ ಆತ್ಮೀಯವಾಗಿ ಆಹ್ವಾನಿಸಿದರು.

**I. ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು.**

**ಕಾರ್ಯಸೂಚಿ ಸಂಖ್ಯೆ: ಪರೀಕ್ಷಾಂಗ ವಿ.ಸ.3:1 (2024)**

ವಿಷಯ: 42ನೇ ವಾರ್ಷಿಕ ಘಟಿಕೋತ್ಸವದಲ್ಲಿ ಪದವಿ ಪಡೆಯಲು ಅರ್ಹತೆ ಹೊಂದಿರುವ ಅಭ್ಯರ್ಥಿಗಳ ಪಟ್ಟಿ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಎಸಿಸಿ:ವಿ.ಸ.3:2 (2024)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ 42ನೇ ವಾರ್ಷಿಕ ಘಟಿಕೋತ್ಸವ ಸಂದರ್ಭದಲ್ಲಿ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡುವ ಬಗ್ಗೆ.

ನಿರ್ಣಯ: ಪ್ರಸ್ತಾವನೆಯಲ್ಲಿ ನಮೂದಿಸಿರುವ ಮಹನೀಯರುಗಳಾದ ಶ್ರೀ ಕೆ. ಪ್ರಕಾಶ್ ಶೆಟ್ಟಿ ಇವರಿಗೆ ಸಮಾಜ ಸೇವೆಗೆ, ಡಾ. ತುಂಬೆ ಮೊಹಿದ್ದೀನ್ ಇವರಿಗೆ ಶಿಕ್ಷಣ ಮತ್ತು ಸಮಾಜ ಸೇವೆ (ಅಲ್ಪಸಂಖ್ಯಾತ) ಹಾಗೂ ಡಾ. ರೊನಾಲ್ಡ್ ಕೊಲ್ಲಾಸೊ ಇವರಿಗೆ ಸಮಾಜ ಸೇವೆಗೆ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

ಮಾನ್ಯ ಕುಲಪತಿಗಳು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

ಕುಲಸಚಿವರು ಕುಲಪತಿಗಳು